ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಹೊರ ಸಂಪನ್ಮೂಲ ಏಜೆನ್ಸಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ನೀಡದಿರುವ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-

86 (90) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಸಿಬ್ಬಂದಿಗಳ ಸೇವೆಯನ್ನು ಒದಗಿಸಲು ಹೊರ ಸಂಪನ್ಮೂಲ ಏಜೆನ್ಸಿಯವರಿಗೆ ಟೆಂಡರ್ ನಿಬಂಧನೆಗಳಿಗೊಳಪಟ್ಟು ಕಾರ್ಯಾದೇಶವನ್ನು ನೀಡಿರುವುದು ನಿಜವೇ ;

(ಆ) ಕಾರ್ಯದೇಶದಲ್ಲಿನ ಷರತ್ತಿನನ್ವಯ ಮುಂಗಡವಾಗಿ ಕನಿಷ್ಠ2 ಮಾಹೆಗಳಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಸಂದಾಯವಾಗಬೇಕಾದ ವೇತನವನ್ನು ಸಂಬಂಧಿಸಿದ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ಇ.ಸಿ.ಎಸ್. ಅಥವಾ ಆರ್.ಟಿ.ಜಿ.ಎಸ್ ಮೂಲಕ ಪ್ರತಿ ತಿಂಗಳು 5ನೇ ದಿನಾಂಕದೊಳಗೆ ವೇತನ ಪಾವತಿಸಬೇಕಾಗಿರುವುದು ನಿಜವೇ ;

(ಇ) ಸರ್ಕಾರದಿಂದ ನಿಗದಿತ ಅನುದಾನ ಬಿಡುಗಡೆಯಾಗದಿರುವುದರಿಂದ 4-5 ತಿಂಗಳಾದರೂ ಸದರಿ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಅವರುಗಳ ಜೀವನ ನಿರ್ವಹಣೆಗೆ ತುಂಬಾ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸಿಬ್ಬಂದಿಗೆ ಕೂಡಲೇ ವೇತನವನ್ನು ಪಾವತಿಸುವ ಸಂಬಂಧ ಸರ್ಕಾರ ಹಣ ಬಿಡುಗಡೆಗೊಳಿಸಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)